ರಾಷ್ಟ್ರೀಯ ಆರೋಗ್ಯ ಅಭಿಯಾನ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ
ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು-560023
ದೂರವಾಣಿ ಸಂಖ್ಯೆ : 08022373587, ಮಿಂಚಂಚೆ:mdnrhmkar@gmail.com

ನಂ: ಹೆಚ್‌ಎಫ್‌ಡಬ್ಲೂ/ಎನ್‌ಹೆಚ್‌ಎಂ/ಸಿಹಿಹೆಚ್‌ಸಿ-ಯುಹೆಚ್‌ಸಿ/ಸಆಅ ನೇಮಕಾತಿ/20/2022-23 ದಿ: 15.11.2022

## ತಿದ್ದುಪಡಿ ಸುತ್ತೋಲೆ

**ವಿಷಯ:** ಉಪ ಕೇಂದ್ರ-ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಿಗೆ ಗುತ್ತಿಗೆ ಆಧಾರದ ಮೇಲೆ ಸಮುದಾಯ ಆರೋಗ್ಯ ಅಧಿಕಾರಿಗಳ ನೇಮಕಾತಿಗಾಗಿ ಆಯ್ಕೆಗೆ ತಿದ್ದುಪಡಿ ಮಾರ್ಗಸೂಚಿಗಳು

**ಉಲ್ಲೇಖ:**
1. ಈ ಕಛೇರಿಯ ಸಮಸಂಖ್ಯೆಯ ಸುತ್ತೋಲೆಯ ದಿನಾಂಕ 21.10.2022
2. ಭಾರತ ಸರ್ಕಾರದ ರಾಷ್ಟ್ರೀಯ ಆರೋಗ್ಯ ಅಭಿಯಾನ ಆರ್.ಒ.ಪಿ ಎಫ್ ನಂ. ಎಂ-11016/ 7/2022/ಎನ್‌ಹೆಚ್‌ಎಂ- II, ದಿ॥09/06/2022
3. ಸಿ.ಹೆಚ್.ಓ ಅಭ್ಯರ್ಥಿಗಳ ಕೋರಿಕೆ ಇ-ಮೇಲ್ ದಿನಾಂಕ 27.10.2022 ರಿಂದ 14.11.2022

********

ಸಮುದಾಯದ ಮನೆಬಾಗಿಲಿಗೆ ಉಪ ಕೇಂದ್ರದ ಆರೋಗ್ಯ ಮತ್ತು ಕ್ಷೇಮ ಕೇಂದ್ರದ ಮುಖೇನ ಪ್ರತಿಬಂಧಕ, ಸಂವರ್ಧನಾ, ಗುಣಪಡಿಸುವ ಚಿಕಿತ್ಸಾ ಕ್ರಮಗಳು, ಪುನರ್‌ವಸತಿ ಮತ್ತು ಉಪಶಾಮಕ ಆರೈಕಾ ಸೇವೆಗಳನ್ನು ಒದಗಿಸಲು ಕರ್ನಾಟಕ ಸರ್ಕಾರವು ಬಿ.ಎಸ್‌ಸಿ ನರ್ಸಿಂಗ್ ಪದವೀಧರರನ್ನು ಸಮುದಾಯ ಆರೋಗ್ಯ ಅಧಿಕಾರಿಗಳಾಗಿ ನೇಮಕ ಮಾಡುವ ಕಾರ್ಯತಂತ್ರವನ್ನು ಕರ್ನಾಟಕ ರಾಜ್ಯವು ಅಳವಡಿಸಿಕೊಂಡಿರುತ್ತದೆ.

ಈ ಹಿನ್ನೆಲೆಯಲ್ಲಿ ಉಲ್ಲೇಖ-1ರನ್ವಯ ರಾಷ್ಟ್ರೀಯ ಆರೋಗ್ಯ ಅಭಿಯಾನ ಕರ್ನಾಟಕ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿಗಳ ಮುಖೇನ 1048 (847 ಹೊಸ ಹುದ್ದೆಗಳು + 201 ಖಾಲಿ ಹುದ್ದೆಗಳು) ಬಿ.ಎಸ್‌ಸಿ ಪದವಿ ಪಡೆದ ಶುಶ್ರೂಷಕರನ್ನು ಎಲ್ಲಾ ಜಿಲ್ಲೆಗಳಲ್ಲಿ ಖಾಲಿಯಿರುವ ಹುದ್ದೆಗಳಿಗೆ ಸಮುದಾಯ ಆರೋಗ್ಯ ಅಧಿಕಾರಿಗಳಾಗಿ ನೇಮಕ ಮಾಡಲು ಕ್ರಮಕೈಕೊಳ್ಳಲಾಗಿತ್ತು.

ಆದರೆ ಅರ್ಜಿಗಳ ಪರಿಶೀಲನೆಯ ಸಮಯದಲ್ಲಿ ಸೂಕ್ತ ದಾಖಲೆಗಳನ್ನು ಅಪ್‌ಲೋಡ್ ಮಾಡದ ಕಾರಣ ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿಗಳು ತಿರಸ್ಕೃತಗೊಂಡಿರುವುದು ಕಂಡುಬಂದಿವೆ. ಅಭ್ಯರ್ಥಿಗಳ ಕೋರಿಕೆ ಮೇರೆಗೆ ಸೂಕ್ತ ದಾಖಲಾತಿಗಳನ್ನು ಅಪ್‌ಲೋಡ್ ಮಾಡಲು ಒಂದು ಬಾರಿ ಅವಕಾಶ ಕಲ್ಪಿಸಲಾಗುತ್ತಿದೆ ಹಾಗೂ ಹೊಸ ಅಭ್ಯರ್ಥಿಗಳಿಗೆ ಆನ್‌ಲೈನ್ ನೋಂದಣಿಯನ್ನು ದಿನಾಂಕ 25.11.2022 ರವರೆಗೆ ತೆರೆಯಲಾಗಿರುತ್ತದೆ. ಅಭ್ಯರ್ಥಿಗಳಿಗೆ ದಿನಾಂಕ 05.12.2022 ರಂದು ಪ್ರವೇಶ ಪತ್ರವನ್ನು ಜಾಲತಾಣದ Candidate Login ನಲ್ಲಿ ಡೌನ್‌ಲೋಡ್ ಮಾಡುವ ಅವಕಾಶ ಕಲ್ಪಿಸಲಾಗಿದೆ (ಈ ಪ್ರವೇಶ ಪತ್ರವು ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳದ ವಿವರವನ್ನು ಒಳಗೊಂಡಿರುತ್ತದೆ).

**ವಿಶೇಷ ಸೂಚನೆ:** ಅರ್ಜಿಗಳು ತಿರಸ್ಕೃತವಾದ ಅಭ್ಯರ್ಥಿಗಳಿಗೆ ಸೂಕ್ತ ದಾಖಲಾತಿಗಳನ್ನು ಅಪ್‌ಲೋಡ್ ಮಾಡಲು ಒಂದು ಬಾರಿ ಅವಕಾಶ ಕಲ್ಪಿಸಲಾಗುತ್ತಿದ್ದು, ಸದರಿ ದಿನಾಂಕವನ್ನು ಜಾಲತಾಣದಲ್ಲಿ ಶೀಘ್ರದಲ್ಲಿಯೇ ತಿಳಿಸಲಾಗುವುದು.

ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಾಗಿ **https://karunadu.karnataka.gov.in/hfw** ಜಾಲತಾಣವನ್ನು ವೀಕ್ಷಿಸುವುದು.

***ಟಿಪ್ಪಣಿ:** ಸಂಯೋಜನಾ ರಹಿತ (Non-Integrated) ತಂಡದ ಅಭ್ಯರ್ಥಿಗಳನ್ನು ಇಂದಿರಾಗಾಂಧಿ ರಾಷ್ಟ್ರೀಯ ಮುಕ್ತ ವಿಶ್ವವಿದ್ಯಾನಿಲಯವು ಅರ್ಜಿ ಸ್ವೀಕರಿಸುವ ಅವಧಿಯಲ್ಲಿ ನಿಯೋಜನೆ ಮಾಡಲಾಗುವುದು. ಹಾಗೂ ತರಬೇತಿ ಮುಗಿದ ನಂತರ ನೇಮಕಾತಿ ಮಾಡಿಕೊಳ್ಳಲಾಗುವುದು.

ಅರುಂಧತಿ
ಅಭಿಯಾನ ನಿರ್ದೇಶಕರು
ರಾಷ್ಟ್ರೀಯ ಆರೋಗ್ಯ ಅಭಿಯಾನ

ಪ್ರತಿ: ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ

1. ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳು, ಜಿಲ್ಲಾ ಪಂಚಾಯತ್ -ಬಾಗಲಕೋಟೆ, ಬೀದರ್, ಬಳ್ಳಾರಿ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಬೆಳಗಾವಿ, ಚಿಕ್ಕಮಗಳೂರು, ಚಿಕ್ಕಬಳ್ಳಾಪುರ, ಚಾಮರಾಜನಗರ, ಚಿತ್ರದುರ್ಗ, ದಕ್ಷಿಣ

ಕನ್ನಡ, ದಾವಣಗೆರೆ, ಧಾರವಾಡ, ಗದಗ, ಹಾಸನ, ಹಾವೇರಿ, ಕಲಬುರಗಿ, ಕೋಲಾರ, ಕೊಡಗು, ಕೊಪ್ಪಳ, ಮೈಸೂರು, ಮಂಡ್ಯ, ರಾಯಚೂರು, ರಾಮನಗರ, ಶಿವಮೊಗ್ಗ, ತುಮಕೂರು, ಉಡುಪಿ, ಉತ್ತರ ಕನ್ನಡ, ವಿಜಯನಗರ, ವಿಜಯಪುರ ಮತ್ತು ಯಾದಗಿರಿ ಜಿಲ್ಲೆಗಳು.

2. ವಿಭಾಗೀಯ ಜಂಟಿ ನಿರ್ದೇಶಕರು: ಕಲಬುರಗಿ/ಬೆಳಗಾವಿ/ಮೈಸೂರು ಮತ್ತು ಬೆಂಗಳೂರು ವಿಭಾಗಗಳು.
3. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು/ಜಿಲ್ಲಾ ಆರ್‌ಸಿಹೆಚ್ ಅಧಿಕಾರಿಗಳು/ಜಿಲ್ಲಾ ಸರ್ವೇಕ್ಷಣಾ ಅಧಿಕಾರಿಗಳು/ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕರು- -ಬಾಗಲಕೋಟೆ, ಬೀದರ್, ಬಳ್ಳಾರಿ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಬೆಳಗಾವಿ, ಚಿಕ್ಕಮಗಳೂರು, ಚಿಕ್ಕಬಳ್ಳಾಪುರ, ಚಾಮರಾಜನಗರ, ಚಿತ್ರದುರ್ಗ, ದಕ್ಷಿಣ ಕನ್ನಡ, ದಾವಣಗೆರೆ, ಧಾರವಾಡ, ಗದಗ, ಹಾಸನ, ಹಾವೇರಿ, ಕಲಬುರಗಿ, ಕೋಲಾರ, ಕೊಡಗು, ಕೊಪ್ಪಳ, ಮೈಸೂರು, ಮಂಡ್ಯ, ರಾಯಚೂರು, ರಾಮನಗರ, ಶಿವಮೊಗ್ಗ, ತುಮಕೂರು, ಉಡುಪಿ, ಉತ್ತರ ಕನ್ನಡ, ವಿಜಯನಗರ, ವಿಜಯಪುರ ಮತ್ತು ಯಾದಗಿರಿ ಜಿಲ್ಲೆಗಳು.

**ಪ್ರತಿ : ಮಾಹಿತಿಗಾಗಿ**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
2. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
3. ಯೋಜನಾ ನಿರ್ದೇಶಕರು(ಆರ್‌ಸಿಹೆಚ್), ಬೆಂಗಳೂರು.
4. ಮುಖ್ಯ ಆಡಳಿತಾಧಿಕಾರಿಗಳು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.
5. ರಾಜ್ಯ ಕಾರ್ಯಕ್ರಮ ವ್ಯವಸ್ಥಾಪಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.
6. ಮುಖ್ಯ ಆರ್ಥಿಕ ಅಧಿಕಾರಿಗಳು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.